**<u>ದಿನಾಂಕಃ 05-12-2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ</u>**

ವಾಹನ ಜೋರಾಗಿ ಚಾಲನೆ ಮಾಡುವಾಗ ಆಯಾ ತಪ್ಪಿ ಬಿದ್ದಾಗ ಕೂಡಾ  ನಿಪಿ.12 ರಲ್ಲಿ ನಮೂದಿಸಿದ  ಗಾಯಗಳು ಆಗುವ ಸಂಭವ ಇದೆ ಎಂದರೆ  ಇರಬಹುದು.  ಆಟೋದಲ್ಲಿ ವ್ಯಕ್ತಿ ಕುಳಿತಿದ್ದಾಗ ಯಾವುದಾದರೂ ಗಟ್ಟಿಯಾದ ವಸ್ತುವಿಗೆ ಕಾಲು ಜೋರಾಗಿ ತಗುಲಿದರೆ  ನಿಪಿ.11 ರಲ್ಲಿ ನಮೂದಿಸಿದ ಗಾಯಗಳು ಆಗುವ ಸಂಭವ ಇದೆ ಎಂದರೆ ಸರಿ.  ಪೊಲೀಸರ ಕೋರಿಕೆಯ ಮೇರೆಗೆ ಸುಳ್ಳು ಗಾಯದ ಪ್ರಮಾಣ ಪತ್ರಗಳನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆ :</u>** ಇಲ್ಲಃ

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

***ಓ ಹೇ ಕೇ ಸ ಇ ಎ ಒ***

Sd/-

***ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ***
***ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.***